# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| 1 | ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | 624 |
| 2 | ಸದಸ್ಯರ ಹೆಸರು | ಶ್ರೀ ಎಸ್.ಎಲ್.ಭೋಜೇಗೌಡ (ಶಿಕ್ಷಕರ ಕ್ಷೇತ್ರ) |
| 3 | ಉತ್ತರಿಸಬೇಕಾದ ದಿನಾಂಕ | 11.03.2020 |
| 4 | ಉತ್ತರಿಸುವ ಸಚಿವರು | ಕಂದಾಯ ಸಚಿವರು |

| ಕ್ರಮ ಸಂಖ್ಯೆ | ಪ್ರಶ್ನೆ | ಉತ್ತರ |
|---|---|---|
| ಅ) | ಚಿಕ್ಕಮಗಳೂರು ಜಿಲ್ಲೆಯ ತರೀಕೆರೆ ತಾಲ್ಲೂಕಿನಿಂದ ಅಜ್ಜಂಪುರವನ್ನು ಬೇರ್ಪಡಿಸಿ ಅಜ್ಜಂಪುರ ತಾಲ್ಲೂಕು ಕೇಂದ್ರವಾಗಿ ಘೋಷಿಸಿರುವುದು ಸರ್ಕಾರದ ಗಮನದಲ್ಲಿದಯೇ; | ಸರ್ಕಾರದ ಅಧಿಸೂಚನೆ ಸಂಖ್ಯೆ: ಆರ್‌ಡಿ 117 ಭೂದಾಪು 2017 ಬೆಂಗಳೂರು ದಿನಾಂಕ: 11.01.2018 ರಂತೆ ಅಜ್ಜಂಪುರವನ್ನು ನೂತನ ತಾಲ್ಲೂಕಾಗಿ ಅಧಿಸೂಚಿಸಲಾಗಿದೆ. |
| ಆ) | ತಾಲ್ಲೂಕು ಕೇಂದ್ರವಾಗಿ ಘೋಷಿಸಿದ ನಂತರ ಅಲ್ಲಿ ತಾಲ್ಲೂಕು ಆಡಳಿತ ಕಾರ್ಯನಿರ್ವಹಣೆ ಯಲ್ಲಿದೆಯೇ; ಎಲ್ಲಾ ಇಲಾಖೆಯ ಸರ್ಕಾರಿ ಕಛೇರಿಗಳನ್ನು ಪ್ರಾರಂಭಿಸಲಾಗಿದೆಯೇ; ಮೂಲ ಸೌಕರ್ಯ ಒದಗಿಸಲಾಗಿದೆಯೇ; ಇಲ್ಲದಿದ್ದಲ್ಲಿ, ಪ್ರಸ್ತುತ ಯಾವ ಹಂತದಲ್ಲಿದೆ; | ಅಜ್ಜಂಪುರ ತಾಲ್ಲೂಕು ಕೇಂದ್ರದಲ್ಲಿ ತಹಶೀಲ್ದಾರ್ ಕಛೇರಿ ಹಾಗೂ ತಾಲ್ಲೂಕು ಪಂಚಾಯತಿ ಕಛೇರಿಗಳು ಪ್ರಾರಂಭವಾಗಿ ಕಾರ್ಯನಿರ್ವಹಿಸುತ್ತಿರುತ್ತವೆ. ಈ ಕಾರ್ಯಾಲಯಗಳಲ್ಲಿ ಮೂಲ ಸೌಕರ್ಯ ಲಭ್ಯವಿರುತ್ತದೆ. ತಾಲ್ಲೂಕು ಮಟ್ಟದ ಕಛೇರಿಗಳಗಾಗಿ ಮಿನಿ ವಿಧಾನ ಸೌಧ ನಿರ್ಮಿಸಲು ಅಜ್ಜಂಪುರ ಗ್ರಾಮದ ಸ.ನಂ.60 ರಲ್ಲಿ 17.00 ಎಕರೆ ಭೂಮಿಯನ್ನು ಕಾಯ್ದಿರಿಸಲಾಗಿದೆ. ಕಟ್ಟಡ ನಿರ್ಮಾಣಕ್ಕಾಗಿ ಸವಿವರ ಅಂದಾಜು ಪಟ್ಟಿ ಸಲ್ಲಿಸಲು ಜಿಲ್ಲಾಧಿಕಾರಿಗಳಿಗೆ ಸೂಚಿಸಲಾಗಿದೆ.<br><br>ಮುಂದುವರಿದು, ಅಜ್ಜಂಪುರ ತಾಲ್ಲೂಕು ಸೇರಿದಂತೆ ಹೊಸದಾಗಿ ರಚಿಸಲಾಗಿರುವ 50 ತಾಲ್ಲೂಕುಗಳು ಕಾರ್ಯಾರಂಭ ಮಾಡಿ, ಆಡಳಿತಾತ್ಮಕ ಪ್ರಕ್ರಿಯೆಯನ್ನು ಪ್ರಾರಂಭಿಸಲು ಹಾಗೂ ಹೊಸ ತಾಲ್ಲೂಕು ಕಚೇರಿಗಳಿಗೆ ಅಗತ್ಯ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸುವ ಸಲುವಾಗಿ 2017-18ನೇ ಸಾಲಿನಲ್ಲಿ ಪ್ರತಿ ತಾಲ್ಲೂಕಿಗೆ ತಲಾ ರೂ.10.00 ಲಕ್ಷಗಳು, 2018-19ನೇ ಸಾಲಿನಲ್ಲಿ ತಲಾ ರೂ.10.00 ಲಕ್ಷಗಳು ಹಾಗೂ 2019-20 ನೇ ಸಾಲಿಗೆ ಪ್ರತಿ ತಾಲ್ಲೂಕಿಗೆ ತಲಾ ರೂ.5.00 ಲಕ್ಷಗಳಂತೆ ಒಟ್ಟಾರೆ ತಲಾ ರೂ.25.00 ಲಕ್ಷಗಳನ್ನು ಸಂಬಂಧಿಸಿದ ಜಿಲ್ಲೆಯ ಜಿಲ್ಲಾಧಿಕಾರಿಗಳಿಗೆ ಬಿಡುಗಡೆ ಮಾಡಲಾಗಿದೆ.<br><br>ನೂತನ ತಾಲ್ಲೂಕುಗಳಲ್ಲಿ ಪ್ರಮುಖ ಇಲಾಖೆಗಳ ತಾಲ್ಲೂಕು ಮಟ್ಟದ ಕಛೇರಿಗಳನ್ನು ಕಾರ್ಯಾರಂಭ ಮಾಡಲು ಸಂಬಂಧಪಟ್ಟ ಸಚಿವಾಲಯದ ಇಲಾಖೆಗಳ ಮುಖ್ಯಸ್ಥರೊಂದಿಗೆ ದಿನಾಂಕ:04.07.2019 ರಂದು ಅಂದಿನ ಮಾನ್ಯ ಕಂದಾಯ ಸಚಿವರು ಸಭೆ ನಡೆಸಿ ಹೊಸ |

| | | |
|---|---|---|
| | | ತಾಲ್ಲೂಕುಗಳು ಪೂರ್ಣ ಪ್ರಮಾಣದಲ್ಲಿ ಕಛೇರಿ ಪ್ರಾರಂಭಿಸಲು ಅನುವಾಗುವಂತೆ ತುರ್ತು ಕ್ರಮ ವಹಿಸಲು ಹಾಗೂ ಹುದ್ದೆಗಳನ್ನು ಸೃಜಿಸಲು ಕ್ರಮ ಕೈಗೊಳ್ಳುವಂತೆ ನಿರ್ದೇಶನ ನೀಡಲಾಗಿದೆ. ಅದರಂತೆ ಆಯಾ ಇಲಾಖೆಗೆ ಸಂಬಂಧಿಸಿದ ಕಚೇರಿಗಳನ್ನು ಪ್ರಾರಂಭಿಸಲು ಹಾಗೂ ಮೂಲಸೌಕರ್ಯ ಒದಗಿಸಲು ಕ್ರಮ ವಹಿಸಲಿವೆ. |
| ಇ) | ತಾಲ್ಲೂಕಿಗೆ ಒಳಪಡುವ ಹೋಬಳಿ ಕೇಂದ್ರಗಳು ಹಾಗೂ ಗ್ರಾಮಗಳನ್ನು ಗುರುತಿಸಲಾಗಿದೆಯೇ; | ಅಜ್ಜಂಪುರ ತಾಲ್ಲೂಕಿಗೆ ಒಟ್ಟು 03 ಹೋಬಳಿಗಳು ಹಾಗೂ 135 ಗ್ರಾಮಗಳನ್ನು ಸೇರ್ಪಡೆ ಮಾಡಿ ಅಧಿಸೂಚಿಸಲಾಗಿದೆ. |
| ಈ) | ಯಾವ ಕಾಲಮಿತಿಯೊಳಗೆ ಪೂರ್ಣ ಪ್ರಮಾಣದ ಆಡಳಿತ ವ್ಯವಸ್ಥೆಯನ್ನು ಅಜ್ಜಂಪುರದಲ್ಲಿ ನಿರೀಕ್ಷಿಸಬಹುದಾಗಿದೆ? | ಹೊಸ ತಾಲ್ಲೂಕುಗಳಲ್ಲಿ ಕಂದಾಯ ಇಲಾಖೆ ವತಿಯಿಂದ ಹೊಸ ತಾಲ್ಲೂಕು ಕಛೇರಿಯನ್ನು ತೆರೆಯಲು ಕ್ರಮವಹಿಸಲಾಗಿದೆ. ಇತರೆ ಇಲಾಖೆಗಳ ತಾಲ್ಲೂಕು ಮಟ್ಟದ ಕಛೇರಿಗಳನ್ನು ಆರ್ಥಿಕ ಇಲಾಖೆಯ ಸಹಮತಿಯೊಂದಿಗೆ ಹಂತ ಹಂತವಾಗಿ ತೆರೆಯಲು ಸರ್ಕಾರದ ದಿನಾಂಕ: 06.09.2017 ರ ಆದೇಶದಲ್ಲಿ ಅನುಮತಿ ನೀಡಲಾಗಿದೆ. ಹಾಗೂ ದಿನಾಂಕ:04.07.2019 ರಂದು ಅಂದಿನ ಮಾನ್ಯ ಕಂದಾಯ ಸಚಿವರು ಸಭೆಯಲ್ಲಿ ಸೂಚಿಸಿರುವಂತೆ ಆಯಾ ಇಲಾಖೆ ವತಿಯಿಂದ ತಾಲ್ಲೂಕು ಮಟ್ಟದ ಇತರೆ ಕಚೇರಿಗಳನ್ನು ಪ್ರಾರಂಭಿಸಬೇಕಾಗಿದೆ. |

**ಸಂಖ್ಯೆ: ಕಂಇ 42 ಎಸ್‌ಎಸ್‌ಸಿ 2020**

(ಆರ್. ಅಶೋಕ)
ಕಂದಾಯ ಸಚಿವರು